## ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ:- ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ 2009-10 ನೇ ಸಾಲಿನ ಬಿಲ್ಲುಗಳ ಪಾವತಿ ಬಗ್ಗೆ.

**ಪ್ರಸ್ತಾವನೆ**

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2009-10 ನೇ ಸಾಲಿನಲ್ಲಿ ನಿರ್ವಹಿಸಲಾದ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ 2010-11 ನೇ ಸಾಲಿನಲ್ಲಿ ಹಣವನ್ನು ಪಾವತಿಸುವ ಕುರಿತು ಸ್ಪಷ್ಟೀಕರಣವನ್ನು ನೀಡುವಂತೆ ಮನವಿಯನ್ನು ಹಾಗೂ ಈ ಬಿಲ್ಲುಗಳ ಪಾವತಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುತ್ತಿವೆ. ಈ ಎಲ್ಲ ಅಂಶಗಳ ಹಿನ್ನಲೆಯಲ್ಲಿ 2009-10 ನೇ ಸಾಲಿನಲ್ಲಿ ನಿರ್ವಹಿಸಲಾದ ಕಾಮಗಾರಿಗಳಿಗೆ 2010-11 ನೇ ಸಾಲಿನಲ್ಲಿ ಹಣ ಪಾವತಿಸುವ ಕುರಿತು ಸ್ಪಷ್ಟ ನಿರ್ದೇಶನ ನೀಡಬೇಕಾಗಿರುವ ಆವಶ್ಯಕತೆ ಇರುತ್ತದೆ. ಹಾಗೂ 2010-11 ನೇ ಸಾಲಿನ ಕಾಮಗಾರಿಗಳಿಗೆ ಹಣ ಪಾವತಿಸುವ ಕುರಿತು ಕೈಗೊಳ್ಳಬೇಕಾಗಿರುವ ಕ್ರಮಗಳನ್ನು ಸ್ಪಷ್ಟಪಡಿಸಬೇಕಾಗಿರುತ್ತದೆ. ಭಾರತ ಸರ್ಕಾರದ ಮಾರ್ಗಸೂಚಿಗಳನ್ನು ಗಮನದಲ್ಲಿಟ್ಟುಕೊಂಡು ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 143 ಮಗಾಂಉಖಾಯೊ 2010 ಬೆಂಗಳೂರು. ದಿನಾಂಕ:*05.10.2010***

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2009-10 ನೇ ಸಾಲಿನಲ್ಲಿ ನಿರ್ವಹಿಸಲಾದ ಕಾಮಗಾರಿಗಳಿಗೆ ಹಣ ಪಾವತಿಸುವ ಕುರಿತು ಹಾಗೂ 2010-11 ನೇ ಸಾಲಿನ ಕಾಮಗಾರಿಗಳಿಗೆ ಹಣ ಪಾವತಿಸುವ ಸಂಬಂಧ ಈ ಕೆಳಗಿನಂತೆ ಕ್ರಮ ಕೈಗೊಳ್ಳಲು ಆದೇಶಿಸಿದೆ.

1. 2009-10 ನೇ ಸಾಲಿನಲ್ಲಿ ನಿರ್ವಹಿಸಿದ ಕಾಮಗಾರಿಯ ವಿವರಗಳನ್ನು 15-04-2010ರೊಳಗೆ ಎಂ.ಐ.ಎಸ್ ನಲ್ಲಿ ದಾಖಲಿಸದೇ ಇದ್ದರೆ ಅಂತಹ ಕಾಮಗಾರಿಗಳಿಗೆ ಪ್ರಸಕ್ತ ಸಾಲಿನಲ್ಲಿ ಹಣ ಪಾವತಿಸಲು ಅವಕಾಶ ಇರುವುದಿಲ್ಲ.
2. ಈಗಾಗಲೇ ಎಂ.ಐ.ಎಸ್‌ನಲ್ಲಿ ದಾಖಲಿಸಿರುವ ಮುಂದುವರೆದ ಕಾಮಗಾರಿಗಳಿಗೆ ಸಂಬಂಧಿಸಿದಂತೆ ವಾಸ್ತವವಾಗಿ ಕೂಲಿಕಾರರು ಕೆಲಸ ನಿರ್ವಹಿಸಿದ ಬಗ್ಗೆ ಎನ್.ಎಂ.ಆರ್‌ಗಳನ್ನು ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿ, ಸ್ಥಳ ತನಿಖೆ ನಡೆಸಿ ಕಾಮಗಾರಿಗಳು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು/ ಜಿಲ್ಲಾ ಪರಿಶೀಲನಾ ತಂಡವು ಪೂರ್ಣಗೊಂಡಿರುವುದನ್ನು ದೃಢೀಕರಿಸಿದ ನಂತರವೇ ಹಣ ಪಾವತಿಸುವುದು. ಕೂಲಿಯ ಹಣವನ್ನು ಪಾವತಿಸುವಾಗ Validated Job Card ಹೊಂದಿರುವವರಿಗೆ ಮಾತ್ರ ಕೂಲಿ ಹಣವನ್ನು ಪಾವತಿಸಲು ಕ್ರಮಜರುಗಿಸುವುದು ಹಾಗೂ ಪಾವತಿ ದಿನಾಂಕವನ್ನು ತಪ್ಪದೇ ಎಂ.ಐ.ಎಸ್‌ನಲ್ಲಿ ದಾಖಲಿಸುವುದು.
3. 2010-11 ನೇ ಸಾಲಿನಲ್ಲಿ ಎಂ.ಐ.ಎಸ್‌ನಲ್ಲಿ ದಾಖಲಿಸದೇ ಯಾವುದೇ ಕಾಮಗಾರಿಗೆ ಹಣ ಪಾವತಿಸತಕ್ಕದ್ದಲ್ಲ. ಒಂದು ವೇಳೆ ಎಂ.ಐ.ಎಸ್‌ನಲ್ಲಿ ದಾಖಲಿಸದೇ ಹಣ ಪಾವತಿಸಿದಲ್ಲಿ ಸಂಬಂಧಪಟ್ಟ ಜಿಲ್ಲಾ ಕಾರ್ಯಕ್ರಮ ಅಧಿಕಾರಿ/ ಕಾರ್ಯಕ್ರಮ ಅಧಿಕಾರಿಯನ್ನು ನೇರವಾಗಿ ಹೊಣೆಗಾರರನ್ನಾಗಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್ ಎಸ್ ಪ್ರಸನ್ನಕುಮಾರ್)
ನಿರ್ದೇಶಕರು,
ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ
ಖಾತರಿ ಯೋಜನೆ ಹಾಗೂ ಪದ ನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ.

ಪ್ರತಿಯನ್ನು:-

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಈ ಆದೇಶವನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ, 500 ಪ್ರತಿಗಳನ್ನು ಈ ಕಛೇರಿಗೆ ಒದಗಿಸಲು ಕೋರಿದೆ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಅರಣ್ಯ, ಜೀವಿ ಶಾಸ್ತ್ರ ಹಾಗೂ ಪರಿಸರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಸಣ್ಣನೀರಾವರಿ) ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು.
10. ಕಾರ್ಯದರ್ಶಿಗಳು, (ಪಂಚಾಯತ್ ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು.
11. ಪ್ರಾದೇಶಿಕ ಆಯುಕ್ತರು, ಪ್ರಾದೇಶಿಕ ಆಯುಕ್ತರ ಕಛೇರಿ, ಮೈಸೂರು/ಬೆಳಗಾವಿ/ಬೆಂಗಳೂರು/ಗುಲ್ಬರ್ಗಾ.
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು.
13. ಮುಖ್ಯಸ್ಥರು (ಹ&ಲೆ), ರಾ.ಗ್ರಾ.ಉ.ಖಾ.ಯೋ., ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು.
14. ನಿರ್ದೇಶಕರು, ಅಬ್ದುಲ್‌ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
15. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು/ ಜಿಲ್ಲಾಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
16. ರಾಜ್ಯದ ಎಲ್ಲಾ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಹೆಚ್ಚಿನ ಪ್ರತಿಗಳು/ರಕ್ಷಾ ಕಡತ.